# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 342 (304)
ಸದಸ್ಯರ ಹೆಸರು : ಡಾ|| ಚಂದ್ರಶೇಖರ್ ಬಿ. ಪಾಟೀಲ್
(ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 07.12.2023
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಸಂವಿಧಾನದ ಕಲಂ 371(ಜೆ) ತಿದ್ದುಪಡಿ ಸಂಪೂರ್ಣ ಜಾರಿ ಮಾಡದೇ ಇರುವುದರಿಂದ ಕಲ್ಯಾಣ ಕರ್ನಾಟಕ ಭಾಗದವರಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಭಾರತ ಸಂವಿಧಾನಕ್ಕೆ ತಿದ್ದುಪಡಿ ಮಾಡಿ ಅನುಚ್ಛೇಧ 371ಜೆ ಅನ್ನು ಸೇರ್ಪಡೆ ಮಾಡುವ ಮೂಲಕ ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ವಿಶೇಷ ಸ್ಥಾನಮಾನವನ್ನು ನೀಡಲಾಗಿರುತ್ತದೆ.' ಸದರಿ ಅನುಚ್ಛೇಧದಡಿಯಲ್ಲಿ ಪ್ರದೇಶಾಭಿವೃದ್ಧಿ, ಸಾರ್ವಜನಿಕ ಉದ್ಯೋಗದಲ್ಲಿ ಮೀಸಲಾತಿ ಹಾಗೂ ಶಿಕ್ಷಣ ಸಂಸ್ಥೆಗಳಲ್ಲಿನ ಪ್ರವೇಶಾತಿಯಲ್ಲಿ ಮೀಸಲಾತಿಗೆ ಒತ್ತು ನೀಡಲಾಗಿರುತ್ತದೆ. ಈ ಅನುಚ್ಛೇಧವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗಿತ್ತು. ಈ ಸಮಿತಿಯ ಶಿಫಾರಸ್ಸಿನನ್ವಯ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ಪ್ರವೇಶ ನಿಯಂತ್ರಣ) ಆದೇಶ, 2013, ಕರ್ನಾಟಕ ಖಾಸಗಿ ಅನುದಾನರಹಿತ ಶೈಕ್ಷಣಿಕ ಸಂಸ್ಥೆಗಳ (ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ಪ್ರವೇಶ ನಿಯಂತ್ರಣ) ಆದೇಶ, 2013, ಹೈದ್ರಾಬಾದ್-ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಆದೇಶ, 2013ನ್ನು ಹೊರಡಿಸಲಾಗಿರುತ್ತದೆ.<br><br>ಮುಂದುವರೆದು, ಅನುಚ್ಛೇದ 371(ಜೆ)ಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಹಿನ್ನೆಲೆಯಲ್ಲಿ ಆಗಿಂದಾಗ್ಗೆ ನಿಯಮಗಳು ಮತ್ತು ಸುತ್ತೋಲೆಗಳನ್ನು ಹೊರಡಿಸಲಾಗಿರುತ್ತದೆ. ಇವುಗಳನ್ನು ಈಗಾಗಲೇ ಸಂಪೂರ್ಣವಾಗಿ ಜಾರಿಗೊಳಿಸಲಾಗಿರುವ ಹಿನ್ನೆಲೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದವರಿಗೆ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ |
| ಆ) | ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು? | |

ಸಂಖ್ಯೆ: ಸಿಆಸುಇ 101 ಹೈಕಕೋ 2023

(ಸಿದ್ದರಾಮಯ್ಯ)
ಮುಖ್ಯಮಂತ್ರಿ